ಕರ್ನಾಟಕ ವಿಧಾನ ಸಭೆ

348 ಶ್ರೀ ವಸಂತ್ ಬಂಗೇರ ಕೆ.

ಶ್ರೀ ಜೆ. ಕರುಣಾಕರ ರೆಡ್ಡಿ (ಕಂದಾಯ ಸಚಿವರು)

ಅ) ಬೆಳ್ತಂಗಡಿ ತಾಲ್ಲೂಕಿನಲ್ಲಿ ಈವರೆವಿಗೂ ಅಕ್ರಮ-ಸಕ್ರಮ ಸಮಿತಿ, ಆರಾಧನ ಸಮಿತಿ, ಆಶ್ರಯ ಸಮಿತಿ ಹಾಗೂ ಇನ್ನಿತರ ಸಮಿತಿಗಳು ರಚನೆಯಾಗಿರುವುದಿಲ್ಲ, ಇದಕ್ಕೆ ಕಾರಣವೇನು;

ಅನಧಿಕೃತ ಸಾಗುವಳಿಯನ್ನು ಸಕ್ರಮೀಕರಣಗೊಳಿಸಲು ಕರ್ನಾಟಕ ಭೂ ಕಂದಾಯ ಕಾಯ್ದೆಯ ಕಲಂ 94ಎ ಮತ್ತು 94ಬಿ ರಡಿ ನಮೂನೆ 50, 53ರಲ್ಲಿ ಸಲ್ಲಿಸಿದ ಅರ್ಜಿಗಳನ್ನು ವಿಲೇವಾರಿ ಮಾಡಲು ಕಾಯ್ದೆಯಲ್ಲಿ ಕಲ್ಪಿಸಿದ್ದ ಕಾಲಾವಧಿಯು ದಿ:26.04.2008ಕ್ಕೆ ಮುಕ್ತಾಯಗೊಂಡಿರುತ್ತದೆ. ಈ ಅವಧಿಯನ್ನು ಮುಂದುವರೆಸಲು ಕಾಯ್ದೆಗೆ ತಿದ್ದುಪಡಿ ತರಲು ವಿಧೇಯಕವನ್ನು ಪ್ರಸ್ತುತ ನಡೆಯುವ ವಿಧಾನ ಮಂಡಲದ ಅಧಿವೇಶನದಲ್ಲಿ ಮಂಡಿಸಲಾಗುತ್ತದೆ. ಕಾಯ್ದೆಗೆ ತಿದ್ದುಪಡಿ ಆದೇಶ ಜಾರಿಗೆ ಬಂದ ನಂತರ ಅಕ್ರಮ-ಸಕ್ರಮ ಸಮಿತಿಗಳನ್ನು ರಚಿಸಲಾಗುವುದು.

ಬೆಳ್ತಂಗಡಿ ವಿಧಾನ ಸಭಾ ಕ್ಷೇತ್ರದ ಆರಾಧನಾ ಸಮಿತಿಯು ಸರ್ಕಾರದ ಆದೇಶ ಸಂಖ್ಯೆ: ಕಂಇ 12 ಮುಸರ 2008, ದಿ:31.12.2008ರನ್ವಯ ರಚಿಸಲಾಗಿದೆ ಹಾಗೂ ಬೆಳ್ತಂಗಡಿ ಆಶ್ರಯ ಸಮಿತಿಯನ್ನು ವಸತಿ ಇಲಾಖೆಯ ಆದೇಶ ಸಂಖ್ಯೆ: ವಇ 31 ಹೆಚ್‌ಎಎಸ್ 08, ದಿ:12.12.2008ರನ್ವಯ ರಚಿಸಲಾಗಿದೆ ಎಂದು ವಸತಿ ಇಲಾಖೆಯ ಪತ್ರ ಸಂಖ್ಯೆ: ವಇ 51 ಹೆಚ್‌ಎಎಂ 2009, ದಿ:07.07.2009ರಲ್ಲಿ ತಿಳಿಸಿದೆ.

ಆ) ಸಮಿತಿಗಳನ್ನು ರಚನೆ ಮಾಡಲು ಎಷ್ಟು ಕಾಲಾವಕಾಶ ಬೇಕಾಗುತ್ತದೆ?

ಮೇಲೆ ನೀಡಿರುವ ಉತ್ತರದಿಂದಾಗಿ ಈ ಪ್ರಶ್ನೆ ಉದ್ಭವಿಸುವುದಿಲ್ಲ.

172 ಡಾ: ಬಗಲಿ ಸಾರ್ವಭೌಮ ಸಾತಗೌಡ(ಇಂಡಿ)

ಶ್ರೀ ಮುರುಗೇಶ್ ಆರ್.ನಿರಾಣಿ(ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು)

ಅ) ಇಂಡಿ ಕ್ಷೇತ್ರದಲ್ಲಿ ಯಾವ ಯಾವ ಮಧ್ಯಮ ಕೈಗಾರಿಕೆಗಳನ್ನು ಸ್ಥಾಪಿಸಬಹುದಾಗಿದೆ.

ಸಕ್ಕರೆ ಕಾರ್ಖಾನೆ, ವೈನ್, ಜವಳಿ ಮತ್ತು ಸಿದ್ಧ ಉಡುಪು ತಯಾರಿಕಾ ಘಟಕಗಳನ್ನು ಸ್ಥಾಪಿಸಬಹುದಾಗಿದೆ. ಈಗಾಗಲೇ ರಾಜ್ಯ ಮಟ್ಟದ ಏಕಗವಾಕ್ಷಿ ಒಪ್ಪಿಗೆ ಸಮಿತಿ ಸಭೆಯು ಎರಡು ಹೊಸ ಸಕ್ಕರೆ ಕಾರ್ಖಾನೆ ಹಾಗೂ ಒಂದು ವಿದ್ಯುತ್ ಉತ್ಪಾದನಾ ಘಟಕಕ್ಕೆ ಸ್ಥಾಪಿಸಲು ಅನುಮೋದನೆ ನೀಡಿರುತ್ತದೆ.

ಆ) ಈ ಕಾಮಗಾರಿಗಳಿಗಾಗಿ ಭೂಮಿಯನ್ನು ಸ್ವಾಧೀನ ಮಾಡಿಕೊಳ್ಳುವ ಯೋಜನೆ ಸರಕಾರದ ಮುಂದಿದೆಯೇ,